ಯಾರು ತನ್ನ ಸಹೋದರನ ಘನತೆಯನ್ನು ಕಾಪಾಡುತ್ತಾನೋ, ಅವನ ಮುಖವನ್ನು ಪುನರುತ್ಥಾನ ದಿನದಂದು ಅಲ್ಲಾಹು ನರಕದಿಂದ ಕಾಪಾಡುತ್ತಾನೆ

ಅಬೂ ದರ್ದಾಅ್ (ಅಲ್ಲಾಹು ಅವರ ಬಗ್ಗೆ ಸಂಪ್ರೀತನಾಗಲಿ) ರಿಂದ ವರದಿ. ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಹೇಳಿದರು: "ಯಾರು ತನ್ನ ಸಹೋದರನ ಘನತೆಯನ್ನು ಕಾಪಾಡುತ್ತಾನೋ, ಅವನ ಮುಖವನ್ನು ಪುನರುತ್ಥಾನ ದಿನದಂದು ಅಲ್ಲಾಹು ನರಕದಿಂದ ಕಾಪಾಡುತ್ತಾನೆ." [صحيح] [رواه الترمذي وأحمد]

ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿ ಇರಲಿ) ಇಲ್ಲಿ ತಿಳಿಸುವುದೇನೆಂದರೆ, ತನ್ನ ಮುಸಲ್ಮಾನ ಸಹೋದರನ ಬಗ್ಗೆ ಯಾರಾದರೂ ದೂಷಣೆ ಮಾಡುವುದನ್ನು ಕೇಳುವಾಗ, ಆ ದೂಷಣೆಯನ್ನು ಅಥವಾ ಕೆಟ್ಟ ಮಾತುಗಳನ್ನು ತಡೆಯುವ ಮೂಲಕ ಯಾರು ಅವನ ಘನತೆಯನ್ನು ಕಾಪಾಡುತ್ತಾನೋ, ಅವನನ್ನು ಪುನರುತ್ಥಾನ ದಿನದಂದು ಅಲ್ಲಾಹು ನರಕದ ಶಿಕ್ಷೆಯಿಂದ ಕಾಪಾಡುತ್ತಾನೆ.

https://sunnah.global/hadeeth/kn/show/5514